## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 552
2. ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 24/09/2020
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ಪೋಲೀಸರಿಗೆ ನಿರ್ಮಿಸಲಾದ ಅನೇಕ ವಸತಿ ಗೃಹಗಳು ಶಿಥಿಲಾವಸ್ಥೆಗೆ ಬಂದಿದ್ದು, ಅವರು ಭಯದ ವಾತಾವರಣ ದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ನವೀಕರಣಗೊಳಿಸಲು ಅಥವಾ ಹೊಸ ವಸತಿಗೃಹ ಕಟ್ಟಲು ಸರ್ಕಾರದ ಯೋಜನೆ ಇದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ, ಇದಕ್ಕೆ ಕಾರಣವೇನು? | ಬೀದರ್ ಜಿಲ್ಲೆಯ ಭಾಲ್ಕಿ ನಗರದಲ್ಲಿ 42 ಹಾಗೂ ಹುಲಸೂರದಲ್ಲಿ 14 ಒಟ್ಟು 56 ಶಿಥಿಲಗೊಂಡ ವಸತಿ ಗೃಹಗಳಲ್ಲಿ ಯಾವುದೇ ಸಿಬ್ಬಂದಿ ವಾಸವಾಗಿರುವುದಿಲ್ಲ.<br><br>ಈಗಾಗಲೇ ಬೀದರ್ ಜಿಲ್ಲೆಯಲ್ಲಿ ಬೀದರ್ ನಗರದ ಪಕ್ಕಲವಾಡಾ, ಜನವಾಡಾ ಮತ್ತು ಮಂಠಾಳಾ ಪೋಲೀಸ್ ವಸತಿ ಗೃಹಗಳ ನವೀಕರಣ/ದುರಸ್ಥಿ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಗೃಹ 2020 ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಒಟ್ಟು 260 ಪೋಲೀಸ್ ಅಧಿಕಾರಿ/ ಸಿಬ್ಬಂದಿಯವರ ವಸತಿ ಗೃಹಗಳು ನಿರ್ಮಾಣವಾಗಿರುತ್ತವೆ. ಹಾಗೂ ಪೋಲೀಸ್ ಗೃಹ 2025 ಯೋಜನೆಯಡಿಯಲ್ಲಿ ಹೊಸದಾಗಿ ವಸತಿಗೃಹ ನಿರ್ಮಾಣ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

ಸಂಖ್ಯೆ:ಹೆಚ್‌ಡಿ 82 ಪಿಬಿಎಲ್ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು